RNU AIR DHARWAD

APRIL 01, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**2027 ರ ರಾಷ್ಟ್ರೀಯ ಜನಗಣತಿಯ ಭಾಗವಾಗಿ, ಇಂದಿನಿಂದ, 15 ರ ವರೆಗೆ ನಾಡಿನಾದ್ಯಂತ, ಡಿಜಿಟಲ್** ಜನಗಣತಿ ಆರಂಭಗೊಂಡಿದೆ. ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಪಾಲ್ಗೊಂಡು ತಮ್ಮ ಮಾಹಿತಿಯನ್ನು ಹಂಚಿಕೊಳ್ಳಬಹುದಾಗಿದೆ. ಮನೆಗೆ ಭೇಟಿ ನೀಡುವ ಗಣತಿದಾರರ ಮೂಲಕವೂ ಮಾಹಿತಿ ಒದಗಿಸಬಹುದಾಗಿದೆ. ಡಿಜಿಟಲ್ ಜನಗಣತಿ ಪ್ರಕ್ರಿಯೆಯಲ್ಲಿ, ಜನರು ತಮ್ಮ ನಿಖರ ಮಾಹಿತಿಯನ್ನು ನೀಡಿ, ಸಹಕರಿಸುವಂತೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಸಾಮಾಜಿಕ ಜಾಲತಾಣದ ಮೂಲಕ ವಿನಂತಿಸಿಕೊಂಡಿದ್ದಾರೆ.

<><><>

**ಡಿ.ಕೆ ಶಿವಕುಮಾರ ಧ್ವನಿ–41 ಸೆಕೆಂದುಗಳು**

<><><>

**ಧಾರವಾಡ ಜಿಲ್ಲೆಯ ಎಲ್ಲ ಗ್ರಾಮಗಳು,** ನಗರ ಪ್ರದೇಶಗಳಲ್ಲಿ ಜನಗಣತಿ ಹಿನ್ನೆಲೆ ಅಗತ್ಯ ಸಿದ್ಧತೆಗಳನ್ನು ಕೈಗೊಂಡು, ಜನಗಣತಿ ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಆರ್.ಸ್ನೇಹಲ್ ತಿಳಿಸಿದ್ದಾರೆ. ಜನರು ತಮ್ಮ ಸ್ವಯಂ ಮಾಹಿತಿಯನ್ನು, ಆನ್ ಲೈನ್ ವೇದಿಕೆ se.census.gov.in ಮೂಲಕ ಭರ್ತಿ ಮಾಡಬಹುದಾಗಿದೆ. ಲಾಗ್ ಇನ್ ಬಳಿಕ, 33 ಪ್ರಶ್ನೆಗಳಿಗೆ ನಿಖರವಾದ ಉತ್ತರ ನೀಡಿ, ಅಪ್ಡೇಟ್ ಮಾಡಬೇಕು, ಬಳಿಕ ಸಿಗುವ ಎಸ್.ಇ ಐಡಿಯನ್ನು ಗಣತಿದಾರರು ಮನೆಗೆ ಬಂದ ಸಂದರ್ಭ, ಅವರಿಗೆ ನೀಡಿ ಸಹಕರಿಸಬೇಕು ಎಂದು ತಿಳಿಸಿದ್ದಾರೆ.

<><><>

**ಹಾವೇರಿ ಜಿಲ್ಲೆಯಲ್ಲಿ ಮೊದಲ** ಹಂತದ ಜನಗಣತಿ ಮಾಹಿತಿ ಸಂಗ್ರಹಕ್ಕೆ, 3 ಸಾವಿರದ 218 ಗಣತಿದಾರರನ್ನು ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

<><><>

**ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು,** ಎರಡು ದಿನಗಳ ರಾಜ್ಯ ಪ್ರವಾಸ ಕೈಗೊಂಡಿದ್ದು, ಇಂದು ತುಮಕೂರು, ಶ್ರೀ ಸಿದ್ಧಗಂಗಾ ಮಠಕ್ಕೆ ಆಗಮಿಸಿದ್ದಾರೆ. ಶ್ರೀ ಸಿದ್ಧಲಿಂಗ ಸ್ವಾಮೀಜಿಯವರ ಸಮ್ಮುಖದಲ್ಲಿ, ಲಿಂಗೈಕ್ಯ ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆಗೆ ರಾಷ್ಟ್ರಪತಿಯವರು ವಿಶೇಷ ಪೂಜೆ ಸಲ್ಲಿಸಿದರು. ಶ್ರೀ ಶಿವಕುಮಾರ ಸ್ವಾಮೀಜಿಯವರ, 119 ನೇ ಜಯಂತ್ಯುತ್ಸವ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು, ತುಮಕೂರು ವಿಶ್ವವಿದ್ಯಾಲಯದ ಹೆಲಿಪ್ಯಾಡ್ ಗೆ ಬಂದಿಳಿದ ರಾಷ್ಟ್ರಪತಿ

ಅವರನ್ನು, ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್, ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ ಜಿ.ಪರಮೇಶ್ವರ ಸ್ವಾಗತಿಸಿದರು. ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ, ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಸೇರಿದಂತೆ ಗಣ್ಯರು ಇದ್ದರು.

<><><>

**ಸಿದ್ಧಗಂಗಾ ಮಠದಲ್ಲಿ ಲಿಂಗೈಕ್ಯ,** ಡಾಕ್ಟರ ಶಿವಕುಮಾರ ಸ್ವಾಮೀಜಿಯವರ, 119ನೇ ಜನ್ಮ ದಿನೋತ್ಸವದ ಸಂಭ್ರಮ ಮನೆ ಮಾಡಿದ್ದು, ಇಂದು ಬೆಳಗ್ಗೆ ಇ ್ಟಲಿಂಗ ಪೂಜೆ ಹಾಗೂ ವಿಶೇ ’ ಧಾರ್ಮಿಕ ಕೈಂಕರ್ಯವನ್ನು ಶ್ರೀ ಸಿದ್ದಲಿಂಗ ಸ್ವಾಮೀಜಿ ನೆರವೇರಿಸಿದರು. ಜನ್ಮಜಯಂತಿ ಹಿನ್ನೆಲೆ, ಶ್ರೀಗಳ ಗದ್ದುಗೆ ದರ್ಶನಕ್ಕೆ ಸಾವಿರಾರು ಭಕ್ತರು ಆಗಮಿಸಿದ್ದು, ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ.

<><><>

**ಉತ್ತರ ಕರ್ನಾಟಕದ ವಿವಿಧೆಡೆಗಳಲ್ಲಿ,** ಬಿಸಿಲಿನ ತಾಪಮಾನ ಹೆಚ್ಚಿದ ಹಿನ್ನೆಲೆ, ಬೆಳಗಾವಿ ವಿಭಾಗದ ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲ ಜಿಲ್ಲೆಗಳಲ್ಲಿ, ಇಂದಿನಿಂದ, ಮೇ ತಿಂಗಳ ಕೊನೆಯವರೆಗೆ ಸರ್ಕಾರಿ ಕಚೇರಿ ಸಮಯದಲ್ಲಿ ಬದಲಾವಣೆ ಮಾಡಲಾಗಿದೆ, ಪ್ರತಿದಿನ ಬೆಳಗ್ಗೆ 8 ಗಂಟೆಯಿಂದ, ಮಧ್ಯಾಹ್ನ 1.30 ರ ವರೆಗೆ, ಕಚೇರಿಗಳು ಕಾರ್ಯನಿರ್ವಹಿಸಲಿವೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸರ್ಕಾರದ ಅಧೀನ ಕಾರ್ಯದರ್ಶಿಗಳಾದ ಮೀನಾಕ್ಷಿ. ಬಿ ತಿಳಿಸಿದ್ದಾರೆ.

<><><>

**ಇಂದಿನಿಂದ, ಧಾರವಾಡ,** ಗದಗ, ಬೆಳಗಾವಿ, ಬೀದರ್, ಕಲಬುರಗಿ, ರಾಯಚೂರು ಸೇರಿದಂತೆ, ರಾಜ್ಯದ ಉತ್ತರ ಒಳನಾಡು ಹಾಗೂ ಕರಾವಳಿಯ ಒಟ್ಟು 12 ಜಿಲ್ಲೆಗಳಲ್ಲಿ, ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

**ಇಂದು ಸ್ವಾತಂತ್ರ್ಯ ಹೋರಾಟಗಾರ,** ಹಾವೇರಿ ಜಿಲ್ಲೆ ಮೋಟೆಬೆನ್ನೂರಿನ ಮೈಲಾರ ಮಹದೇವಪ್ಪನವರ ಹುತಾತ್ಮ ದಿನ. ಹರ್ಡೇಕರ ಮಂಜಪ್ಪ ಅವರಿಂದ ಪ್ರಭಾವಿತರಾದ, ಮಹದೇವಪ್ಪನವರು ತಮ್ಮ 16 ನೇ ವಯಸ್ಸಿನಲ್ಲಿಯೇ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪಾಲ್ಗೊಂಡು, ಬ್ರಿಟಿಷರ ವಿರುದ್ಧ ಹೋರಾಟ ನಡೆಸಿದ್ದರು. ಹುತಾತ್ಮ ಮೈಲಾರ ಮಹದೇವಪ್ಪನವರ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ, ಇಂದು ಹುತಾತ್ಮರ ವೀರಸೌಧದಲ್ಲಿ ಶ್ರದ್ಧಾಸುಮನ ಅರ್ಪಿಸಲಾಗುತ್ತಿದೆ.

<><><>

**ಚಾಮರಾಜನಗರ ಜಿಲ್ಲೆ,** ಬೂದಿ ಪಡಗ ಆನೆ ಶಿಬಿರದಲ್ಲಿ ಒಂಟಿಯಾಗಿದ್ದ, ಗಜೇಂದ್ರ ಆನೆಯನ್ನು, ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ಆದೇಶದಂತೆ ನಾಗರಹೊಳೆ ಅರಣ್ಯ ವ್ಯಾಪ್ತಿಯ, ಮತ್ತಿಗೋಡು ಶಿಬಿರಕ್ಕೆ ಸ್ಥಳಾಂತರಿಸಲಾಯಿತು. ಹಲವು ಬಾರಿ ದಸರಾ ಮಹೋತ್ಸವದಲ್ಲಿ ಭಾಗಿಯಾಗಿ, ಬೂದಿಪಡಗ ಆನೆ ಶಿಬಿರದಲ್ಲಿ ಏಕಾಂಗಿಯಾಗಿದ್ದ ಗಜೇಂದ್ರನನ್ನು ಸ್ಥಳಾಂತರಿಸುವಂತೆ ಸಾರ್ವಜನಿಕರು ಸಚಿವರಿಗೆ ಮನವಿ ಸಲ್ಲಿಸಿದ್ದರು.

<><><>

**ಕುವೆಂಪು ಭಾ ಾ ಭಾರತಿ ಪ್ರಾಧಿಕಾರದ,** ಎಲ್ಲ ಪ್ರಕಟಿತ ಪುಸ್ತಕಗಳನ್ನು, ಸಂವಿಧಾನ ಶಿಲ್ಪಿ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ ಜನ್ಮದಿನದ ಪ್ರಯುಕ್ತ, ಇಂದಿನಿಂದ ಏಪ್ರಿಲ್ 30 ರ ವರೆಗೆ, ಶೇಕಡ 50 ರ ರಿಯಾಯಿತಿ ದರದಲ್ಲಿ ಮಾರಾಟ

ಮಾಡಲಾಗುವುದು ಎಂದು ಪ್ರಾಧಿಕಾರದ ರಿಜಿಸ್ಟ್ರಾರ್ ದತ್ತಪ್ಪ ಸಾಗನೂರ ತಿಳಿಸಿದ್ದಾರೆ. ಆನ್ ಲೈನ್ ಮೂಲಕವೂ ಶೇಕಡ 50 ರ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>